Akashvani : Bangalore

Regional Bulletin In Kannada

26.05.2025 / 14.30 hrs

ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

<u>ಮುಖ್ಯಾಂಶಗಳು</u>

- ಬೆಂಗಳೂರು ಅರಮನೆ ಮೈದಾನದ ಭೂಮಿ ಸ್ವಾಧೀನ ವಿಚಾರ; ಸುಪ್ರೀಂಕೋರ್ಟ್ ಮುಖ್ಯನ್ಯಾಯಮೂರ್ತಿ ಪೀಠಕ್ಕೆ ರಾಜ್ಯ ಸರ್ಕಾರ ಅರ್ಜಿ

- ರಾಜ್ಯದಲ್ಲಿ ಕೊರೋನಾ ಪ್ರಕರಣಗಳು ಹೆಚ್ಚುತ್ತಿರುವ ಹಿನ್ನೆಲೆ; ಮುಖ್ಯಮಂತ್ರಿ ಸಿದ್ದರಾಮಯ್ಯ ನೇತೃತ್ವದಲ್ಲಿ ಇಂದು ಸಭೆ

- ರಾಜ್ಯದ ವಿವಿಧೆಡೆ ವರ್ಷಧಾರೆ : ಬೆಂಗಳೂರಿನಲ್ಲಿ ೧೦೦ ವರ್ಷದ ದಾಖಲೆ ಮುರಿದ ಮಳೆ

- ಸರ್ಕಾರದಿಂದ ಪ್ರತಿಪಕ್ಷಗಳ ದನಿ ಅಡಗಿಸುವ ಯತ್ನ - ಕೇಂದ್ರ ಸಚಿವ ಪ್ರಲ್ಹಾದ್ ಜೋಶಿ ಗಂಭೀರ ಆರೋಪ

- ಬಳ್ಳಾರಿಯ ಸಂಡೂರಿನಲ್ಲಿ ರಸ್ತೆ ಅಪಘಾತ - ಒಂದೇ ಕುಟುಂಬದ ನಾಲ್ವರು ಸಾವು

**<><*<><>*><>**

ಮೈಸೂರು ರಾಜಮನೆತನದ ಸೇರಿದ ಬೆಂಗಳೂರು ಅರಮನೆ ಮೈದಾನದ ೧೫ ಎಕರೆ ಭೂಮಿ ಸ್ವಾಧೀನಕ್ಕೆ ಸಂಬಂಧಿಸಿದಂತೆ ರಾಜ್ಯ ಸರ್ಕಾರ ಸುಪ್ರೀಂಕೋರ್ಟ್ ಮುಖ್ಯ ನ್ಯಾಯಮೂರ್ತಿ ನೇತೃತ್ವದ ಪೀಠದ ಮುಂದೆ ಅರ್ಜಿ ಸಲ್ಲಿಸಿದೆ. ರಾಜ್ಯ ಸರ್ಕಾರದ ಪರ ಹಿರಿಯ ವಕೀಲ ಕಪಿಲ್ ಸಿಬಲ್ ಈ ವಿಷಯವನ್ನು ತುರ್ತಾಗಿ ಪಟ್ಟಿ ಮಾಡುವಂತೆ ಮನವಿ ಮಾಡಿದ್ದಾರೆ. ನಾಳೆ ನ್ಯಾಯಮೂರ್ತಿ ಬಿ.ಆರ್. ಗವಾಯಿ ನೇತೃತ್ವದ ಪೀಠ, ಈ ವಿಷಯವನ್ನು ಕೈಗೆತ್ತಿಕೊಳ್ಳಲಿದೆ. ಬೆಂಗಳೂರಿನಲ್ಲಿ ರಸ್ತೆ ಅಗಲೀಕರಣ ಯೋಜನೆಗಾಗಿ ಸ್ವಾಧೀನಪಡಿಸಿಕೊಂಡಿರುವ ಅರಮನೆ ಮೈದಾನದ ೧೫ ಎಕರೆ ಆಸ್ತಿಗೆ ಮೂರು ಸಾವಿರ ಕೋಟಿ ರೂಪಾಯಿ ಮೌಲ್ಯದ ಟಿಡಿಆರ್‌ಗಳನ್ನು ನೀಡುವಂತೆ ಸುಪ್ರೀಂಕೋರ್ಟ್ ಈ ಹಿಂದೆ ಸರ್ಕಾರಕ್ಕೆ ನಿರ್ದೇಶನ ನೀಡಿತ್ತು.

<><*<><>*><>

ರಾಜಧಾನಿ ಬೆಂಗಳೂರು ಸೇರಿದಂತೆ ರಾಜ್ಯದಲ್ಲಿ ಕೊರೊನಾ ಪ್ರಕರಣಗಳು ಹೆಚ್ಚುತ್ತಿರುವ ಹಿನ್ನೆಲೆಯಲ್ಲಿ ಆರೋಗ್ಯ ಇಲಾಖೆ ಎಚ್ಚೆತ್ತುಕೊಂಡಿದೆ. ಮುಖ್ಯಮಂತ್ರಿ ಸಿದ್ಧರಾಮಯ್ಯ ಅವರು ಇಂದು ಆರೋಗ್ಯಸಚಿವ ದಿನೇಶ್ ಗುಂಡೂರಾವ್ ಸೇರಿದಂತೆ ಹಿರಿಯ ಅಧಿಕಾರಿಗಳೊಂದಿಗೆ ಮಹತ್ವದ ಸಭೆ ನಡೆಸಲಿದ್ದಾರೆ. ಸಭೆಯಲ್ಲಿ ಕೊರೊನಾ ಮುನ್ನೆಚ್ಚರಿಕೆ ಕುರಿತಂತೆ ಚರ್ಚೆ ನಡೆಸಲಿದ್ದಾರೆ.

<><*<><>*><>

ರಾಜ್ಯದೆಲ್ಲೆಡೆ ಧಾರಾಕಾರ ಮಳೆಯಾಗುತ್ತಿದ್ದು ಜನಜೀವನ ಅಸ್ತವ್ಯಸ್ತ ವಾಗಿದೆ. ಕೊಡಗು ಜಿಲ್ಲೆಯಾದ್ಯಂತ ನಿರಂತರವಾಗಿ ಧಾರಾಕಾರ ಮಳೆಯಾಗುತ್ತಿದ್ದು ಮಡಿಕೇರಿ ತಲಕಾವೇರಿ ಭಾಗಮಂಡಲ ಸೇರಿದಂತೆ ಜಿಲ್ಲೆಯ ಪ್ರಮುಖ ಪಟ್ಟಣಗಳಲ್ಲಿ ಸಾಮಾನ್ಯ ಜನಜೀವನ ವ್ಯತ್ಯಯವಾಗಿದೆ. ಇಂದು ಜಿಲ್ಲೆಯ ಕಾಲೇಜುಗಳು ಮತ್ತು ಅಂಗನವಾಡಿಗಳಿಗೆ ರಜೆ ಘೋಷಿಸಲಾಗಿದೆ. ಚಿಕ್ಕಮಗಳೂರು ಜಿಲ್ಲೆಯ ಕಳಸ, ಮೂಡಿಗೆರೆ, ಶೃಂಗೇರಿ, ಕೊಪ್ಪ ಹಾಗು ಎನ್.ಆರ್ ಪುರ ತಾಲೂಕಿನ ಅಂಗನವಾಡಿಗಳಿಗೆ ಇಂದಿನಿಂದ ೨೮ ರವರೆಗೆ ಜಿಲ್ಲಾಧಿಕಾರಿಗಳು ರಜೆ ಘೋಷಣೆ ಮಾಡಿದ್ದಾರೆ. ಇಂದು ಮುಂಜಾನೆಯಿಂದ ಹೆಚ್ಚಿನ ಮಳೆಯಾಗುತಿದ್ದು ಚಿಕ್ಕಮಗಳೂರು ನಗರ, ಮೂಡಿಗೆರೆ, ಕೊಟ್ಟಿಗೆಹಾರ, ಕಳಸ ಸೇರಿ ಹಲವೆಡೆ ರಸ್ತೆಗಳ ಮೇಲೆ ನೀರು ಹರಿಯುತ್ತಿದೆ. ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಮುಂಗಾರು ಬಿರುಸುಗೊಂಡಿದೆ. ಭಾರೀ ಮಳೆಯಾಗುತ್ತಿರುವ ಹಿನ್ನೆಲೆಯಲ್ಲಿ ಜಿಲ್ಲೆಯ ಎಲ್ಲಾ ಅಂಗನವಾಡಿಗಳಿಗೆ ಜಿಲ್ಲಾಡಳಿತ ರಜೆ ಘೋಷಿಸಿದೆ. ವ್ಯಾಪಕ ಮಳೆಯಾಗುತ್ತಿರುವುದರಿಂದ ವಿಪತ್ತು ನಿರ್ವಹಣೆಗೆ ರಾಷ್ಟ್ರೀಯ ಮತ್ತು ರಾಜ್ಯ ವಿಪತ್ತು ನಿರ್ವಹಣಾ ದಳಗಳು ಜಿಲ್ಲೆಯಲ್ಲಿ ಬೀಡುಬಿಟ್ಟಿದ್ದು, ಅಗತ್ಯ ಮುಂಜಾಗ್ರತಾ ಕ್ರಮ ಕೈಗೊಂಡಿದೆ. ಜಿಲ್ಲೆಯಲ್ಲಿ ಇನ್ನೂ ನಾಲ್ಕು ದಿನ ಭಾರೀ ಮಳೆಯಾಗುವ ಮುನ್ಸೂಚನೆಯನ್ನು ಹವಾಮಾನ ಇಲಾಖೆ ನೀಡಿದೆ. ಭಾರೀ ಗಾಳಿ ಮಳೆಯ ಪರಿಣಾಮ ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ನಿನ್ನೆಯಿಂದ ಇದುವರೆಗೆ ೭ ಮನೆಗಳಿಗೆ ಭಾಗಶಃ ಹಾನಿ ಸಂಭವಿಸಿದೆ. ಒಟ್ಟು ೨೩೭ ವಿದ್ಯುತ್ ಕಂಬಗಳು ಮುರಿದು ಬಿದ್ದಿದ್ದು, , ೨ ಟ್ರಾನ್ಸ್‌ಫಾರ್ಮರ್‌ಗಳಿಗೆ ಹಾನಿಯಾಗಿದೆ ಎಂದು ಜಿಲ್ಲಾಡಳಿತ ಮಾಹಿತಿ ನೀಡಿದೆ. ಉಡುಪಿ ಜಿಲ್ಲೆಯಲ್ಲಿ ರೆಡ್ ಅಲರ್ಟ್ ಘೋಷಣೆಯಾಗಿರುವ ಹಿನ್ನೆಲೆಯಲ್ಲಿ ಜಿಲ್ಲೆಯಾದ್ಯಂತ ಮುನ್ನೆಚ್ಚರಿಕೆ ಕ್ರಮ ಕೈಗೊಳ್ಳುವಂತೆ ಉಡುಪಿ ಜಿಲ್ಲಾ ಉಸ್ತುವಾರಿ ಸಚಿವೆ ಲಕ್ಷ್ಮೀ ಹೆಬ್ಬಾಳಕರ್ ಜಿಲ್ಲಾಡಳಿತಕ್ಕೆ ಸೂಚನೆ ನೀಡಿದ್ದಾರೆ. ಸಮುದ್ರ ಹಾಗೂ ನದಿ ತಟದಲ್ಲಿ

ವಾಸಿಸುತ್ತಿರುವ ಜನರನ್ನು ಅಗತ್ಯಬಿದ್ದರೆ ಮುನ್ನೆಚ್ಚರಿಕೆ ಕ್ರಮವಾಗಿ ಸ್ಥಳಾಂತರಿಸಬೇಕು. ಜನರ ಅನುಕೂಲಕ್ಕಾಗಿ ಕಾಳಜಿ ಕೇಂದ್ರಗಳನ್ನು ತೆಗೆಯಬೇಕು. ಸಾರ್ವಜನಿಕರು ಜಿಲ್ಲಾಡಳಿತದೊಂದಿಗೆ ಸಹಕರಿಸಬೇಕು ಎಂದು ಸಚಿವರು ಮನವಿ ಮಾಡಿದ್ದಾರೆ.

<><*<><>*><>

ಇತಿಹಾಸದಲ್ಲೇ ಮೊದಲ ಬಾರಿಗೆ ಮೇ ತಿಂಗಳಿನಲ್ಲಿ ದಾಖಲೆಯ ಮಳೆಯಾಗಿದೆ. ನೂರು ವರ್ಷದಲ್ಲೇ ಬೆಂಗಳೂರಲ್ಲಿ ಈ ಬಾರಿ ಬಿದ್ದ ಮಳೆ ದಾಖಲೆ ಸೃಷ್ಟಿಸಿದೆ ಎಂದು ಹವಾಮಾನ ಇಲಾಖೆ ವಿಜ್ಞಾನಿ ಸಿಎಸ್ ಪಾಟೀಲ್ ತಿಳಿಸಿದ್ದಾರೆ.ಬೆಂಗಳೂರಲ್ಲಿ ಮೇ ತಿಂಗಳಲ್ಲೇ ೩೦೭.೯ ಮಿಲಿ ಮೀಟರ್ ಮಳೆ ದಾಖಲೆಯಾಗಿದೆ. ೧೦೦೩ ಮೇ ತಿಂಗಳಲ್ಲಿ ೩೦೫.೪ ಮಿಲಿಮೀಟರ್ ಮಳೆ ದಾಖಲಾಗಿತ್ತು. ಈ ದಾಖಲೆಯನ್ನು ಈ ಬಾರಿಯ ಮಳೆ ಮುರಿದಿದೆ ಎಂದು ಅವರು ಹೇಳಿದ್ದಾರೆ.ಜೂನ್ ೫ ಕ್ಕೆ ಮುಂಗಾರು ಆಗಮನದ ನಿರೀಕ್ಷೆ ಇತ್ತು. ಆದರೆ ಮೇ ೨೪ಕ್ಕೆ ರಾಜ್ಯಕ್ಕೆ ಮುಂಗಾರು ಪ್ರವೇಶವಾಗಿದೆ. ಇಂದು ಸಂಪೂರ್ಣ ರಾಜ್ಯಕ್ಕೆ ಮುಂಗಾರು ಪ್ರವೇಶವಾಗಿದೆ ಎಂದು ಮಾಹಿತಿ ನೀಡಿದ್ದಾರೆ. ಇದೇ ೩೦ರ ವರೆಗೆ ರಾಜ್ಯದಲ್ಲಿ ಮಳೆ ಮುಂದುವರೆಯಲಿದೆ ಎಂದು ತಿಳಿಸಿದ್ದಾರೆ.

<><*<><>*><>

ಬಿಬಿಎಂಪಿ ವ್ಯಾಪ್ತಿಯಲ್ಲಿ ಗುರುತಿಸಿರುವಂತಹ ಪ್ರವಾಹ ಪೀಡಿತ ಪ್ರದೇಶಗಳಲ್ಲಿ ಸಮಸ್ಯೆಗಳನ್ನು ಬಗೆಹರಿಸಲು ಮುಖ್ಯ ಆಯುಕ್ತರಾದ ಮಹೇಶ್ವರ್ ರಾವ್  ಅಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ. ಪ್ರತಿ ವಲಯದ ಎಲ್ಲಾ ಅಧಿಕಾರಿಗಳು ಕ್ರಿಯಾಶೀಲವಾಗಿ ಕಾರ್ಯನಿರ್ವಹಿಸುವಂತೆ ನಿರ್ದೇಶನ ನೀಡಿದ್ದಾರೆ. ಮಳೆಗಾಲದ ವೇಳೆ ರಾಜ ಕಾಲುವೆಗಳಲ್ಲಿ ಸರಾಗವಾಗಿ ನೀರು ಹರಿದು ಹೋಗುವಂತೆ ಮಾಡಬೇಕು. ಆರ್.ಸಿ.ಸಿ ತಡೆಗೋಡೆ ನಿರ್ಮಾಣ ಮಾಡದ ರಾಜಕಾಲುವೆಗಳ ಸುತ್ತಮುತ್ತಲಿನ ಪ್ರದೇಶಗಳಲ್ಲಿ ಜಲಾವೃತವಾಗದಂತೆ ಅಗತ್ಯ ಕ್ರಮಗಳನ್ನು ಕೈಗೊಳ್ಳಲು ಸೂಚಿಸಿದ್ದಾರೆ. ನಗರದಲ್ಲಿ ೨೧೦ ಪ್ರವಾಹ ಪೀಡಿತ ಪ್ರದೇಶಗಳ ಪೈಕಿ ಈಗಾಗಲೇ ೧೭೭ ಕಡೆ ಸಮಸ್ಯೆಯನ್ನು ಬಗೆಹರಿಸಲಾಗಿದೆ ಎಂದು ಮಾಹಿತಿ ನೀಡಿದ್ದಾರೆ.

<><*<><>*><>

ರಾಜ್ಯದಲ್ಲಿ ಹಿಟ್ಲರ್ ಆಡಳಿತ ಜಾರಿಯಲ್ಲಿದೆ ಎಂದು ಕೇಂದ್ರ ಸಚಿವ ಪ್ರಹ್ಲಾದ್ ಜೋಷಿ ಆರೋಪಿಸಿದ್ದಾರೆ. ಸಾಮಾಜಿಕ ಜಾಲ ತಾಣದಲ್ಲಿ ಪೋಸ್ಟ್ ಮಾಡಿರುವ ಅವರು ಸರ್ಕಾರದ ವೈಫಲ್ಯಗಳ ಬಗ್ಗೆ ಮಾತನಾಡಿದರೆ ಸಂಕೋಚ ಯಾಕೆ ಎಂದು ಪ್ರಶ್ನಿಸಿದ್ದಾರೆ. ಹಿಟ್ಲರ್ ಆಡಳಿತದ ಪದ್ಧತಿ, ಮೊಘಲರ ಆಡಳಿತದ ಪದ್ಧತಿಯನ್ನು ಕರ್ನಾಟಕ ಎಂದಿಗೂ ಸಹಿಸುವುದಿಲ್ಲ ಎಂದು ಹೇಳಿದ್ದಾರೆ. ಭ್ರಷ್ಟಾಚಾರ, ವೈಫಲ್ಯಗಳ ಬಗ್ಗೆ ದನಿ ಎತ್ತುತ್ತಿರುವ ಪ್ರತಿಪಕ್ಷದ ಮೇಲೆ ಸುಳ್ಳು ಕೇಸು

ದಾಖಲಿಸುವ ಮೂಲಕ ಸರ್ಕಾರ ವಿಪಕ್ಷಗಳ ದನಿ ಅಡಗಿಸುವ ಪ್ರಯತ್ನ ಮಾಡುತ್ತಿದೆ ಎಂದು ಪ್ರತಿಪಕ್ಷ ನಾಯಕ ಆರ್ ಅಶೋಕ ಅಸಮಾಧಾನ ವ್ಯಕ್ತಪಡಿಸಿದ್ದಾರೆ.

<><*<><>*><>

ಬಳ್ಳಾರಿ ಜಿಲ್ಲೆಯ ಸಂಡೂರು ತಾಲೂಕಿನ ಜೈಸಿಂಗ್ ಪುರ ಬಳಿ ಇಂದು ಬೆಳಿಗ್ಗೆ ಲಾರಿ ಹಾಗೂ ಕಾರಿನ ನಡುವೆ ಮುಖಾ ಮುಖಿ ಡಿಕ್ಕಿ ಸಂಭವಿಸಿ ಸ್ಥಳದಲ್ಲೇ ಇಬ್ಬರು ಮಕ್ಕಳು ಸೇರಿದಂತೆ ನಾಲ್ವರು ಸಾವನ್ನಪ್ಪಿದ್ದಾರೆ. ಸಂಡೂರು ತಾಲೂಕಿನ ಲಕ್ಷ್ಮೀಪುರದಿಂದ ಹೊಸಪೇಟೆಗೆ ನಂದೀಶ್ ಅವರ ಕುಟುಂಬ ಹೊರಟಿತ್ತು. ಹೊಸಪೇಟೆ ಕಡೆಯಿಂದ ಬಂದ ಅದಿರು ಸಾಗಾಣೆಯ ಟಿಪ್ಪರ್ ಲಾರಿ ಚಾಲಕನ ನಿಯಂತ್ರಣ ತಪ್ಪಿ ಕಾರಿಗೆ ಡಿಕ್ಕಿಹೊಡೆದಿದೆ. ಈ ಬಗ್ಗೆ ಸಂಡೂರು ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

<><*<><>*><>

ಅದ್ದೂರಿ ಮದುವೆಗಾಗಿ ಸಾಲ ಮಾಡುವುದು ಸರಿಯಲ್ಲ ಎಂದು ಯಾದಗಿರಿ ಜಿಲ್ಲಾ ಉಸ್ತುವಾರಿ ಸಚಿವರಾದ ಶರಣಬಸಪ್ಪ ದರ್ಶನಾಪುರ ತಿಳಿಸಿದ್ದಾರೆ.
ಶಹಾಪುರ ತಾಲ್ಲೂಕಿನ ಭೀಮರಾಯನಗುಡಿಯಲ್ಲಿ ಹಮ್ಮಿಕೊಂಡಿದ್ದ ಉಚಿತ ಸರಳ ಸಾಮೂಹಿಕ ವಿವಾಹ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಎಷ್ಟೇ ಕಷ್ಟಗಳಿದ್ದರೂ ಮಕ್ಕಳಿಗೆ ಕಡ್ಡಾಯವಾಗಿ ಶಿಕ್ಷಣ ಕೊಡಿಸಿ ಎಂದು ಕಿವಿಮಾತು ಹೇಳಿದರು.

ದುಂದು ವೆಚ್ಚ ಮಾಡಿ ಬಡ ಮತ್ತು ಮಧ್ಯಮ ವರ್ಗದ ಕುಟುಂಬಗಳು ಆರ್ಥಿಕ ಸಂಕಷ್ಟಕ್ಕೆ ಸಿಲುಕಬಾರದು ಎಂಬ ಸದುದ್ದೇಶದಿಂದ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಪ್ರೋತ್ಸಾಹ ಧನ ನೀಡುವ ಯೋಜನೆಯನ್ನು ಆರಂಭಿಸಿದ್ದಾರೆ.

ಇದೇ ಸಂದರ್ಭದಲ್ಲಿ ೧೦ ಜೋಡಿಗಳು ಕಂಕಣ ಭಾಗ್ಯ ಪಡೆದರು.

<><*<><>*><>

ರಾಜ್ಯದ ಸರ್ಕಾರಿ ಆಸ್ಪತ್ರೆ ಆವರಣದಲ್ಲಿರುವ ೧೮೨ ಪ್ರಧಾನ ಮಂತ್ರಿ ಜನೌಷಧಿ ಕೇಂದ್ರಗಳನ್ನು ಆಸ್ಪತ್ರೆಗಳ ಆವರಣದಿಂದ ತೆಗೆಯದಂತೆ ಕನ್ನಡನಾಡು ರೈತ ಸಂಘ ಮುಖ್ಯಮಂತ್ರಿ ಸಿದ್ಧರಾಮಯ್ಯ ಅವರಿಗೆ ಮನವಿ ಮಾಡಿದೆ.
ಬಳ್ಳಾರಿಯಲ್ಲಿ ಸಂಘದ ಅಧ್ಯಕ್ಷ ಈಶ್ವರಪ್ಪ ಮೆಣಸಿನ ಮತ್ತವರ ಬೆಂಬಲಿಗರು ಇಂದು ಜಿಲ್ಲಾಧಿಕಾರಿ ಕಚೇರಿ ಆವರಣದಲ್ಲಿ ಪ್ರತಿಭಟನೆ ನಡೆಸಿದರು.

ಆಸ್ಪತ್ರೆಯ ಹೊರಗಿನ ಮೆಡಿಕಲ್ ಸ್ಟೋರ್‌ಗಳ ಮಾಫಿಯಾಗೆ ಮಣಿದು ಈ ರೀತಿ ನಿರ್ಧಾರ ಕೈಗೊಂಡಿದ್ದಾರೆ ಎಂದು ಆರೋಪಿಸಿದರು.

<><*<><>*><>

ಬಿಡಾಡಿ ದನಗಳು, ಹಾಗೂ ಬೀದಿ ನಾಯಿಗಳ ಹಾವಳಿ, ಕಲುಷಿತ ನೀರಿನ ಸರಬರಾಜು ಸೇರಿದಂತೆ ಮೂಲಭೂತ ಸಮಸ್ಯೆಗಳಿಂದ ಹದಗೆಟ್ಟಿರುವ ಬಳ್ಳಾರಿ ನಗರವನ್ನು ಸರಿಪಡಿಸಲು ಮುಂದಾಗಬೇಕೆಂದು ಆಗ್ರಹಿಸಿ ಮಹಾನಗರ ಪಾಲಿಕೆ ಮುಂದೆ ಇಂದು ಬಳ್ಳಾರಿ ನಾಗರೀಕ ಹೋರಾಟ ಸಮಿತಿ ಪ್ರತಿಭಟನೆ ನಡೆಸಿತು.

ನಗರದ ಹಲವಡೆ ನಡೆಯುತ್ತಿರುವ ಕಾಮಗಾರಿಗಳು ಮಂದಗತಿಯಲ್ಲಿ ನಡೆಯುತ್ತಿವೆ. ಇವುಗಳಿಗಾಗಿ ವೆಚ್ಚ ಮಾಡಿದ ಕೋಟ್ಯಾಂತರ ರೂಪಾಯಿ ಹಣ ಅಪವ್ಯಯವಾಗುತ್ತಿದೆ ಎಂದು ಪಾಲಿಕೆಯ ವಿರುದ್ಧ ಘೋಷಣೆ ಕೂಗಿದರು.

ನಗರದಲ್ಲಿ ಕುಡಿಯುವ ನೀರಿನಲ್ಲಿ ಚರಂಡಿ ನೀರು ಸೇರದಂತೆ ಮಾಡಬೇಕು. ಹೊರ ಚರಂಡಿಗಳಲ್ಲಿ ತುಂಬಿದ ಹೂಳನ್ನು ತೆಗೆಯಬೇಕು ಎಂದು ಆಗ್ರಹಿಸಿದರು.

<><*<><>*><>

೨೬.೦೫.೨೦೨೫ ಪ್ರದೇಶ ಸಮಾಚಾರ ಸಂಕ್ಷಿಪ್ತ ಸುದ್ದಿಗಳು

೧. ಚಿಕ್ಕಬಳ್ಳಾಪುರ ಜಿಲ್ಲಾ ಕೇಂದ್ರದಲ್ಲಿ ೧೭.೮೩ ಲಕ್ಷ ರೂಪಾಯಿ ವೆಚ್ಚದಲ್ಲಿ ನಿರ್ಮಿಸಿರುವ ಕನ್ನಡ ಭವನವನ್ನು ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಖಾತೆ ಸಚಿವ ಶಿವರಾಜ ತಂಗಡಗಿ ನಾಳೆ ಲೋಕಾರ್ಪಣೆ ಮಾಡಲಿದ್ದಾರೆ.

೨. ಜೂ.೫ ರಂದು ವಿಶ್ವ ಪರಿಸರ ದಿನವನ್ನು ಆಚರಿಸುವ ಹಿನ್ನಲೆಯಲ್ಲಿ ಜಾಗತಿಕವಾಗಿ ಪ್ಲಾಸ್ಟಿಕ್ ಮಾಲಿನ್ಯವನ್ನು ಕೊನೆಗೊಳಿಸುವುದು' ಎಂಬ ಘೋಷ ವಾಕ್ಯದೊಂದಿಗೆ ಎಲ್ಲಾ ಗ್ರಾಮ ಪಂಚಾಯಿತಿಗಳಲ್ಲಿ ಜಾಗೃತಿ ಅಭಿಯಾನ ನಡೆಸಲಾಗುತ್ತಿದೆ ಎಂದು ಯಾದಗಿರಿ ಜಿಲ್ಲಾ ಪಂಚಾಯಿತಿ ಮುಖ್ಯಕಾರ್ಯನಿರ್ವಾಹಕ ಅಧಿಕಾರಿ ಲವೀಶ್ ಒರಡಿಯಾ ತಿಳಿಸಿದ್ದಾರೆ.

ಕನ್ನಡ ಬಾವುಟದ ವಿನ್ಯಾಸಕಾರ ಕೀರ್ತಿಶೇಷ ರಾಮಮೂರ್ತಿ ಅವರ ಪತ್ನಿ ಕಮಲಮ್ಮ ವಯೋಸಹಜ ಹಿನ್ನೆಲೆಯಲ್ಲಿ ಬೆಂಗಳೂರಿನ ಖಾಸಗಿ ಆಸ್ಪತ್ರೆಯಲ್ಲಿ ನಿಧನರಾಗಿದ್ದಾರೆ.

<><*<><>*><>